ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015–16ನೇ ಸಾಲಿನ 14ನೇ ಹಣಕಾಸು ಆಯೋಗದ ಮೊದಲನೇ ಕಂತಿನ ಸಾಮಾನ್ಯ ಮೂಲ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಭಾರತ ಸರ್ಕಾರದ ಪತ್ರ ಸಂ.ಎಫ್. 13(1), ಎಫ್‌ಎಫ್‌ಸಿ/ಎಫ್‌ಸಿಡಿ/2015–16, ದಿನಾಂಕ: 29–07–2015.
2. ಆರ್ಥಿಕ ಇಲಾಖೆಯ ಅ.ಟಿ.ಸಂಖ್ಯೆ: ಆಇ 25 ಎಫ್‌ಸಿಸಿ 2015, ದಿನಾಂಕ: 05–08–2015.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ದಿನಾಂಕ: 10.03.2015.

**ಪ್ರಸ್ತಾವನೆ:**

14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2015–16ನೇ ಸಾಲಿನಿಂದ 2019–20ರ ಸಾಲಿನವರೆಗಿನ 5 ವರ್ಷದ ಅವಧಿಗೆ ಸಾಮಾನ್ಯ ಮೂಲ ಅನುದಾನ ರೂ. 8359.79 ಕೋಟಿಗಳನ್ನು ಭಾರತ ಸರ್ಕಾರವು ನಿಗಧಿಪಡಿಸಿರುತ್ತದೆ.

14ನೇ ಹಣಕಾಸು ಆಯೋಗದ 2015–16ನೇ ಸಾಲಿನ ಸಾಮಾನ್ಯ ಮೂಲ ಅನುದಾನದ (General Basic Grants) ಮೊದಲನೇ ಕಂತು ರೂ. 501,43,00,000/- (ಐದು ನೂರ ಒಂದು ಕೋಟಿ ನಲವತ್ಮೂರು ಲಕ್ಷಗಳು ಮಾತ್ರ)ಗಳನ್ನು ಮೇಲೆ ಓದಲಾದ (1)ರ ಭಾರತ ಸರ್ಕಾರದ ಪತ್ರದನ್ವಯ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಸಂಪೂರ್ಣವಾಗಿ ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ (2)ರ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ 2015–16ನೇ ಸಾಲಿನ ಸಾಮಾನ್ಯ ಮೂಲ ಅನುದಾನದ ಮೊದಲನೇ ಕಂತು ರೂ. 501,43,00,000/- (ಐದು ನೂರ ಒಂದು ಕೋಟಿ ನಲವತ್ಮೂರು ಲಕ್ಷಗಳು ಮಾತ್ರ)ಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

ಪ್ರಸ್ತುತ 2015–16ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತಿಯ ಲೆಕ್ಕ ಶೀರ್ಷಿಕೆ 2515–00–198–11–300(ಯೋಜನೇತರ)ಯಡಿ ರೂ. 100285.00 ಲಕ್ಷಗಳನ್ನು ಒದಗಿಸಿರುತ್ತದೆ. ಸದರಿ ಅನುದಾನದಲ್ಲಿ ರೂ. 501,43,00,000/- ಲಕ್ಷಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ನೇರವಾಗಿ ಸಂಬಂಧಪಟ್ಟ ಬ್ಯಾಂಕು ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ.

449 ಗ್ರಾಮ ಪಂಚಾಯತಿಗಳು ಹೊಸದಾಗಿ ಸೃಜನೆಯಾಗಿದ್ದು, ಸೃಜನೆಯಾಗಿರುವ ಹೊಸ ಗ್ರಾಮ ಪಂಚಾಯತಿಗಳಿಗೆ ಪಂಚತಂತ್ರ ತಂತ್ರಾಂಶವನ್ನು ಅಳವಡಿಸಿರುವುದಿಲ್ಲ. ಆದುದರಿಂದ ರಾಜ್ಯದಲ್ಲಿನ ಒಟ್ಟು 6007 ಗ್ರಾಮ ಪಂಚಾಯತಿಗಳಲ್ಲಿ 5558 ಗ್ರಾಮ ಪಂಚಾಯತಿಗಳಿಗೆ ರೂ. 473,06,44,751/- ಗಳ 14ನೇ ಹಣಕಾಸು ಆಯೋಗದ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ಉಳಿದ ರೂ. 28,36,55,249/-ಗಳ ಅನುದಾನವನ್ನು ಸದರಿ ಹೊಸ ಗ್ರಾಮ ಪಂಚಾತಿಗಳಿಗೆ ಪಂಚತಂತ್ರ ತಂತ್ರಾಂಶವನ್ನು ಒದಗಿಸಿದ ನಂತರ ಬಿಡುಗಡೆಗೊಳಿಸಲಾಗುವುದು.

ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಿದ ಸಾಮಾನ್ಯ ಮೂಲ ಅನುದಾನದ ಹಾಗೂ ಸಾಮಾನ್ಯ ಕಾರ್ಯಕ್ಷಮತೆ ಅನುದಾನದಿಂದ ಶೇ. 25ರಷ್ಟು ಅನುದಾನವನ್ನು ಮೇಲೆ ಓದಲಾದ (3)ರಂತೆ ESCOM ಕಂಪನಿಗಳಿಗೆ ಪಾವತಿಸಬೇಕಾಗಿರುತ್ತದೆ.

ಮುಂದುವರೆದು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸುವ ರೂ. 473,06,44,751/- ಗಳಲ್ಲಿ ಶೇ.25ರಷ್ಟು ಅಂದರೆ, ರೂ. 118,26,61,188/-ಗಳ ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಯಲ್ಲಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆ ಮಾಡಲು ಮೇಲೆ ಓದಲಾದ (3)ರ ಆದೇಶದಲ್ಲಿ ಸೂಚಿಸಲಾಗಿರುತ್ತದೆ.

ESCROW ಖಾತೆಗಳಿಗೆ ಬಿಡುಗಡೆಗೊಳಿಸಿ ಉಳಿದ ರೂ. 354,79,83,563/- ಗಳನ್ನು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ಗ್ರಾಪಸ 2015, ದಿನಾಂಕ: 19-08-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2015-16ನೇ ಸಾಲಿನ ಮೊದಲನೇ ಕಂತಿನ ಸಾಮಾನ್ಯ ಮೂಲ ಅನುದಾನವನ್ನು ಭಾರತ ಸರ್ಕಾರವು ರಾಜ್ಯಕ್ಕೆ ಬಿಡುಗಡೆ ಮಾಡಿರುವ ರೂ. 501,43,00,000/-ಗಳಲ್ಲಿ ರೂ. 473,06,44,751/- (ನಾಲ್ಕು ನೂರ ಎಪ್ಪತ್ಮೂರು ಕೋಟಿ ಆರು ಲಕ್ಷದ ನಲವತ್ನಾಲ್ಕು ಸಾವಿರದ ಏಳು ನೂರ ಐವತ್ತೊಂದು ರೂಪಾಯಿಗಳು ಮಾತ್ರ)ಗಳ (ಅನುಬಂಧ) ಅನುದಾನವನ್ನು 5558 ಗ್ರಾಮ ಪಂಚಾಯತಿಗಳ ಸಂಬಂಧಪಟ್ಟ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಆನ್‌ಲೈನ್ ಮುಖಾಂತರ ಜಮೆ ಮಾಡಲು ಆದೇಶಿಸಿದೆ.

ಪ್ರಸ್ತುತ ಗ್ರಾಮಗಳಿಗೆ ಬಿಡುಗಡೆ ಮಾಡುತ್ತಿರುವ ರೂ. 473,06,44,751/- ಗಳಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು ಶೇ.25ರಷ್ಟು ಅಂದರೆ, ರೂ. 118,26,61,188/-ಗಳ ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಯಲ್ಲಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆಗೊಳಿಸಿ ಉಳಿದ ರೂ. 354,79,83,563/- ಗಳನ್ನು (ಅನುಬಂಧ) ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ಆದೇಶಿಸಿದೆ.

14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ **ಸದರಿ ಅನುದಾನವನ್ನು ಕಡ್ಡಾಯವಾಗಿ** ಈ ಕೆಳಕಂಡ **ಚಟುವಟಿಕೆಗಳಿಗೆ ಮಾತ್ರ ನಿಯಮಾನುಸಾರ ವಿನಿಯೋಗಿಸಬೇಕಾಗಿರುತ್ತದೆ.**

- ಮೂಲ ನಾಗರೀಕ ಸೇವೆಗಳ ಸ್ಥಿತಿಯನ್ನು ಉತ್ತಮಗೊಳಿಸಲು ನೀರು ಸರಬರಾಜು ಹಾಗೂ ನೈರ್ಮಲ್ಯ.
- ಒಳಚರಂಡಿ ಮತ್ತು ಗಣತ್ಯಾಜ್ಯ ವಸ್ತುಗಳ ನಿರ್ವಹಣೆ.
- ಮಳೆ ನೀರಿನ ಒಳಚರಂಡಿ.
- ಸಮುದಾಯ ಸ್ವತ್ತುಗಳ ನಿರ್ವಹಣೆ.
- ಬೀದಿ ದೀಪಗಳು, ಪಾದಚಾರಿ ಹಾಗೂ ರಸ್ತೆಗಳ ನಿರ್ವಹಣೆ.
- ಸ್ಮಶಾನ ಮತ್ತು ರುದ್ರಭೂಮಿ ನಿರ್ವಹಣೆ.

**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಕಲ್ಯಾಣಕ್ಕಾಗಿ ಕನಿಷ್ಠ ಶೇ.25 ರಷ್ಟು ಅನುದಾನವನ್ನು ಉಪಯೋಗಿಸಲು ಕಾರ್ಯಕ್ರಮ ರೂಪಿಸುವುದು.**

ಪಂಚಾಯತ್ ರಾಜ್ ಸಂಸ್ಥೆಗಳಿಗೆ ನೀಡಲಾಗುವ ಹಣವನ್ನು ಸರ್ಕಾರದ ಅಧೀನ ಕಾರ್ಯದರ್ಶಿ (ಜಿಲ್ಲಾ ಪಂಚಾಯತ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀದಿಯ ಮೇಲೆ ಡ್ರಾ ಮಾಡಿ ನಂತರ ಚೆಕ್‌ಗಳನ್ನು 14ನೇ ಹಣಕಾಸು ಆಯೋಗದ ಉಳಿತಾಯ ಖಾತೆ ಸಂಖ್ಯೆ: 64062923099, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, "ಜಿ ಸೇವಾ" ಬ್ರಾಂಚ್, ಲೇಡಿ ಕರ್ಜನ್ ರಸ್ತೆ, ಬೆಂಗಳೂರು-560001 ಇವರಿಗೆ ಬಿಡುಗಡೆಗೊಳಿಸಿ ನಂತರ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸರ್ಕಾರವು ನಿಗಧಿಪಡಿಸಿರುವ ಮೊತ್ತದ ಅನುಸಾರ ಬಿಡುಗಡೆ ಮಾಡಲು ಆದೇಶಿಸಿದೆ.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆರ್ಥಿಕ ಆಯೋಗೆ ಕೋಶದ ಟಿಪ್ಪಣಿ ಸಂಖ್ಯೆ: ಎಫ್‌ಡಿ 25 ಎಫ್‌ಸಿಸಿ 2015, ದಿನಾಂಕ:05-08-2015ರನ್ವಯ ಲೆಕ್ಕ ಶೀರ್ಷಿಕೆ 2515-00-198-6-11-300(ಯೋಜನೇತರ) ಯಡಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲು ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ) ಕರ್ನಾಟಕ ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398 ಬೆಂಗಳೂರು.

2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸುತ್ತಾ, ಸದರಿ ಅನುದಾನದ ಸಮರ್ಪಕ ಬಳಕೆ ಬಗ್ಗೆ ಸೂಕ್ತ ಮೇಲ್ವಿಚಾರಣೆ ನಡೆಸುವ ವ್ಯವಸ್ಥೆ ಕಲ್ಪಿಸಲು ತಿಳಿಸಿದೆ.
3. ರಾಜ್ಯದ ಮುಖ್ಯ ಲೆಕ್ಕಾಧಿಕಾರಿಗಳಿಗೆ/ಮುಖ್ಯ ಯೋಜನಾಧಿಕಾರಿಗಳಿಗೆ ಕಳುಹಿಸಿದೆ.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸದರಿ ಅನುದಾನವನ್ನು ನಿಯಮಾನುಸಾರ ಬಳಕೆ ಮಾಡಲು ತಿಳಿಸಿದೆ.
5. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಕರ್ನಾಟಕ ವಿಕಾಸ/ ವೆಬ್‌ಸೈಟ್.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ~~ಆಪ್ತ ಕಾರ್ಯದರ್ಶಿಗಳು~~.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ&ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, ~~4ನೇ ಹಂತ,~~ ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ನಿರ್ದೇಶಕರು (ಪಂ.ರಾಜ್-1&2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.

ಸರ್ಕಾರಿ ಅದೇಶ ಸಂಖ್ಯೆ: ಗ್ರಾಅಪ 44 ಗ್ರಾಪಸ 2015, ದಿನಾಂಕ: 19-08-2015ರ ಅನುಬಂಧ

(ಗ್ರಾಪಂ) ಘೋಷ್ವಾರೆ **Basic Grant 1st Installment 2015-16**

| Sl.No | District | GP (In Rs) | GP General Share (In Rs) | GP Electricty Share (In Rs) |
|---|---|---|---|---|
| 1 | ಬಾಗಲಕೋಟೆ | 144244178 | 108183134 | 36061045 |
| 2 | ಬೆಂಗಳೂರು | 104296541 | 78222406 | 26074135 |
| 3 | ಬೆಂಗಳೂರು (ಗ್ರಾ) | 90940469 | 68205352 | 22735117 |
| 4 | ಬೆಳಗಾವಿ | 418346831 | 313760123 | 104586708 |
| 5 | ಬಳ್ಳಾರಿ | 184083599 | 138062699 | 46020900 |
| 6 | ಬೀದರ್ | 162202954 | 121652215 | 40550738 |
| 7 | ವಿಜಯಾಪುರ | 199187981 | 149390986 | 49796995 |
| 8 | ಚಾಮರಾಜನಗರ | 108515184 | 81386388 | 27128796 |
| 9 | ಚಿಕ್ಕಬಳ್ಳಾಪುರ | 126784937 | 95088703 | 31696234 |
| 10 | ಚಿಕ್ಕಮಗಳೂರು | 126876859 | 95157644 | 31719215 |
| 11 | ಚಿತ್ರದುರ್ಗ | 178858558 | 134143919 | 44714640 |
| 12 | ದಕ್ಷಿಣ ಕನ್ನಡ | 159686067 | 119764550 | 39921517 |
| 13 | ದಾವಣಗರೆ | 168431634 | 126323725 | 42107908 |
| 14 | ಧಾರವಾಡ | 96808090 | 72606068 | 24202023 |
| 15 | ಗದಗ | 84666362 | 63499771 | 21166590 |
| 16 | ಕಲಬುರಗಿ | 207263092 | 155447319 | 51815773 |
| 17 | ಹಾಸನ | 188895814 | 141671861 | 47223954 |
| 18 | ಹಾವೇರಿ | 153323296 | 114992472 | 38330824 |
| 19 | ಕೊಡಗು | 66062677 | 49547007 | 16515669 |
| 20 | ಕೋಲಾರ | 140531147 | 105398360 | 35132787 |
| 21 | ಕೊಪ್ಪಳ | 126961280 | 95220960 | 31740320 |
| 22 | ಮಂಡ್ಯ | 193860240 | 145395180 | 48465060 |
| 23 | ಮೈಸೂರು | 217866819 | 163400115 | 54466705 |
| 24 | ರಾಯಚೂರು | 173538079 | 130153559 | 43384520 |
| 25 | ರಾಮನಗರ | 104350105 | 78262578 | 26087526 |
| 26 | ಶಿವಮೊಗ್ಗ | 152856409 | 114642307 | 38214102 |
| 27 | ತುಮಕೂರು | 274134674 | 205601005 | 68533668 |
| 28 | ಉಡುಪಿ | 116592456 | 87444342 | 29148114 |
| 29 | ಉತ್ತರ ಕನ್ನಡ | 141681566 | 106261175 | 35420392 |
| 30 | ಯಾದಗಿರಿ | 118796852 | 89097639 | 29699213 |
| **Total** | | **4730644751** | **3547983563** | **1182661188** |

Under Secy. to Govt. (ZP)
Rural Devt. & pan. Raj. Dept